1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1520
2. ಸದಸ್ಯರ ಹೆಸರು : ಶ್ರೀ ಯು.ಬಿ. ವೆಂಕಟೇಶ್
3. ಉತ್ತರಿಸುವ ದಿನಾಂಕ : 10-03-2022.
4. ಉತ್ತರಿಸುವವರು : ಮಾನ್ಯ ಮುಖ್ಯಮಂತ್ರಿಯವರು.

ಕ್ರ.ಸಂ	ಪ್ರಶ್ನೆ	ಉತ್ತರ
ಅ	ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಚುನಾವಣೆಯನ್ನು ನಡೆಸುವ ಆಸಕ್ತಿಯನ್ನು ಸರ್ಕಾರ ಹೊಂದಿದೆಯೇ;	ಹೊಂದಿದೆ.
ಆ	ಹಾಗಿದ್ದಲ್ಲಿ; ಸರ್ಕಾರ ಈವರೆಗೆ ಚುನಾವಣೆಯನ್ನು ನಡೆಸದೆ ಮುಂದೂಡುತ್ತಿರಲು ಕಾರಣವೇನು;	ಕೌನ್ಸಿಲ್ ಅವಧಿಯು ದಿನಾಂಕ:10-09-2020ಕ್ಕೆ ಮುಕ್ತಾಯ ಗೊಂಡಿದ್ದು, ಸರ್ಕಾರದ ಅಧಿಸೂಚನೆ ಸಂಖ್ಯೆ: ನಅಇ 17 ಬಿಬಿಎಲ್ 2020 (ಭಾಗ-1)(ಇ), ದಿನಾಂಕ: 14-10-2020ರಲ್ಲಿ ಕೆ.ಎಂ.ಸಿ. ಕಾಯ್ದೆ, 1976ರ(1977ರ ಕರ್ನಾಟಕ ಅಧಿನಿಯಮ, 14)ರ 21ನೇ ಪ್ರಕರಣದ (2)(ಎ) ಉಪ ಪ್ರಕರಣದನ್ವಯ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಪ್ರದೇಶಕ್ಕೆ ಸಂಬಂಧಿಸಿದಂತೆ ವಾರ್ಡ್‌ಗಳನ್ನು ಪುನರ್ ವಿಂಗಡಣೆ ಮಾಡಲು 06(ಆರು) ತಿಂಗಳ ಅವಧಿಗೆ ಸೀಮಿತವಾಗಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಆಯುಕ್ತರ ಅಧ್ಯಕ್ಷತೆಯಲ್ಲಿ ವಾರ್ಡ್‌ಗಳ ಪುನರ್ ವಿಂಗಡಣಾ ಸಮಿತಿಯನ್ನು ರಚಿಸಲಾಗಿತ್ತು. ಬಿ.ಬಿ.ಎಂ.ಪಿ.ಗೆ ಚುನಾವಣೆಯನ್ನು ನಡೆಸುವ ಕುರಿತು ಶ್ರೀ ಎಂ.ಶಿವರಾಜ್, ಬೆಂಗಳೂರು ಇವರು ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ರಿಟ್ ಅರ್ಜಿ ಸಂಖ್ಯೆ: 10216/2020 ಮತ್ತು ರಾಜ್ಯ ಚುನಾವಣಾ ಆಯೋಗವು ಸಲ್ಲಿಸಿದ್ದ ರಿಟ್ ಅರ್ಜಿ ಸಂಖ್ಯೆ: 1892/2020ರಲ್ಲಿ ಮಾನ್ಯ ಉಚ್ಚ ನ್ಯಾಯಾಲಯವು ಪ್ರಕರಣಗಳ ವಿಚಾರಣೆ ನಡೆಸಿ ದಿನಾಂಕ: 04-12-2020ರಂದು ನೀಡಿರುವ ಆದೇಶದ ವಿರುದ್ಧ ಸರ್ಕಾರವು ಮಾನ್ಯ ಸರ್ವೋಚ್ಚ ನ್ಯಾಯಾಲಯದಲ್ಲಿ ಎಸ್.ಎಲ್.ಪಿ. ಸಂಖ್ಯೆ:15181-15183/2020ನ್ನು ದಾಖಲಿಸಿರುತ್ತದೆ. ಸದರಿ ಪ್ರಕರಣದಲ್ಲಿ ಮಾನ್ಯ ಸರ್ವೋಚ್ಚ ನ್ಯಾಯಾಲಯವು ದಿನಾಂಕ: 18-12-2020ರ ಆದೇಶದಲ್ಲಿ ಮಾನ್ಯ ಉಚ್ಚ ನ್ಯಾಯಾಲಯವು ನೀಡಿರುವ ಆದೇಶಕ್ಕೆ ತಡೆಯಾಜ್ಞೆಯನ್ನು ನೀಡಿದ್ದು, ಪ್ರಕರಣವು ವಿಚಾರಣೆಯ ಹಂತದಲ್ಲಿರುತ್ತದೆ.
ಇ	ಬಿ.ಬಿ.ಎಂ.ಪಿ. ಚುನಾವಣೆಯನ್ನು ಈಗಿರುವ 198 ವಾರ್ಡ್‌ಗಳಿಗನುಸಾರವಾಗಿ ನಡೆಸಲು ಉದ್ದೇಶಿಸಿದೆಯೇ ಅಥವಾ ವಾರ್ಡ್‌ಗಳನ್ನು ಹೆಚ್ಚುವರಿಯಾಗಿ ಸೃಷ್ಟಿಸುವ ಉದ್ದೇಶವನ್ನು ಹೊಂದಿದೆಯೇ; (ವಿವರವನ್ನು ಒದಗಿಸುವುದು)	
		ದಿನಾಂಕ:11-01-2021ರಿಂದ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಅಧಿನಿಯಮ 2020, ಜಾರಿಗೆ ಬಂದಿರುತ್ತದೆ. ಸರ್ಕಾರದ ಅಧಿಸೂಚನೆ ಸಂಖ್ಯೆ:ನಅಇ 17 ಬಿಬಿಎಲ್ 2020(ಭಾ-1)(ಇ), ದಿನಾಂಕ:29.01.2021 ರಲ್ಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಅಧಿನಿಯಮ, 2020(2020ರ ಕರ್ನಾಟಕ ಅಧಿನಿಯಮ 53)ರ ನಿಯಮ 7ನೇ ಪ್ರಕರಣದ (3)ನೇ ಉಪ ಪ್ರಕರಣದ ಖಂಡ (ಎ)ರ ಪರಂತುದನ್ವಯ ಅಧಿಕಾರವನ್ನು ಚಲಾಯಿಸಿ ಸರ್ಕಾರವು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಕೌನ್ಸಿಲ್‌ರಗಳ ಸಂಖ್ಯೆಯು 243 ಎಂದು ನಿಗಧಿಪಡಿಸಲಾಗಿರುತ್ತದೆ.

...2

		ಮುಂದುವರೆದು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಅಧಿನಿಯಮ, 2020(2020ರ ಕರ್ನಾಟಕ ಅಧಿನಿಯಮ 53)ರ ನಿಯಮ 7ನೇ ಪ್ರಕರಣದ (3)ನೇ ಉಪ ಪ್ರಕರಣದ ಖಂಡ (ಎ)ರ ಪರಂತುದನ್ವಯ ಅಧಿಕಾರವನ್ನು ಚಲಾಯಿಸಿ ಸರ್ಕಾರದ ಅಧಿಸೂಚನೆ ಸಂಖ್ಯೆ:ನಅಇ 17 ಬಿಬಿಎಲ್ 2020(ಭಾ-1)(ಇ), ದಿನಾಂಕ:29.01.2021 ರಲ್ಲಿ ಸರ್ಕಾರವು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಪ್ರದೇಶಕ್ಕೆ ಸಂಬಂಧಿಸಿದಂತೆ ವಾರ್ಡ್‌ಗಳನ್ನು ಪುನರ್ ವಿಂಗಡಣೆ ಮಾಡಲು 06 (ಆರು) ತಿಂಗಳ ಅವಧಿಗೆ ಸೀಮಿತವಾಗಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಆಯುಕ್ತರ ಅಧ್ಯಕ್ಷತೆಯಲ್ಲಿ ವಾರ್ಡ್‌ಗಳ ಪುನರ್ ವಿಂಗಡಣಾ ಸಮಿತಿಯನ್ನು ರಚಿಸಲಾಗಿರುತ್ತದೆ. ಮುಖ್ಯ ಆಯುಕ್ತರು ಹಾಗೂ ಅಧ್ಯಕ್ಷರು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವಾರ್ಡ್‌ಗಳ ಪುನರ್ ವಿಂಗಡಣಾ ಸಮಿತಿ ಇವರು ದಿನಾಂಕ:25-08-2021ರ ಪತ್ರದಲ್ಲಿ, ಕೋವಿಡ್-19 ಸಾಂಕ್ರಾಮಿಕ ರೋಗದ ಹಿನ್ನೆಲೆಯಲ್ಲಿ ಸೋಂಕು ತಡೆಗಟ್ಟುವ ನಿಟ್ಟಿನಲ್ಲಿ ಉಪಕ್ರಮಗಳನ್ನು ಕೈಗೊಳ್ಳುವಲ್ಲಿ ಕಾರ್ಯಪ್ರವೃತ್ತರಾಗಿದ್ದರ ಹಿನ್ನೆಲೆಯಲ್ಲಿ ಸಮಿತಿಗೆ ನಿಗಧಿಪಡಿಸಿದ ಅವಧಿಯಲ್ಲಿ ವಾರ್ಡ್‌ಗಳ ಪುನರ್ ವಿಂಗಡಣಾ ಕಾರ್ಯವನ್ನು ಪೂರ್ಣಗೊಳಿಸಲು ಸಾಧ್ಯವಾಗಿರುವುದಿಲ್ಲ. ಆದ್ದರಿಂದ, ಸಮಿತಿಯ ಅವಧಿಯನ್ನು ಇನ್ನೂ 06 ತಿಂಗಳ ಅವಧಿಗೆ ವಿಸ್ತರಿಸುವಂತೆ ಕೋರಿದ್ದು, ಸರ್ಕಾರವು ಅಧಿಸೂಚನೆ ಸಂಖ್ಯೆ: ನಅಇ 17 ಬಿಬಿಎಲ್ 2020 (ಭಾಗ-1)(ಇ), ದಿನಾಂಕ:30-10-2021ರಲ್ಲಿ ವಾರ್ಡ್‌ಗಳ ಪುನರ್ ವಿಂಗಡಣಾ ಸಮಿತಿಯ ಅವಧಿಯನ್ನು ದಿನಾಂಕ:28-07-2021ರಿಂದ ಜಾರಿಗೆ ಬರುವಂತೆ 06 ತಿಂಗಳ ಅವಧಿಗೆ ಮುಂದುವರೆಸಲಾಗಿರುತ್ತದೆ. ಪ್ರಸ್ತುತ, ಪಾಲಿಕೆಯ ಮುಖ್ಯ ಆಯುಕ್ತರು ಹಾಗೂ ಅಧ್ಯಕ್ಷರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವಾರ್ಡ್‌ಗಳ ಪುನರ್ ವಿಂಗಡಣಾ ಸಮಿತಿ ಇವರು ಕೋವಿಡ್-19 ವೈರಾಣು ಸೋಂಕು ತಡೆಗಟ್ಟುವ ಉಪಕ್ರಮಗಳನ್ನು ಕೈಗೊಳ್ಳುವಲ್ಲಿ ನಿರಂತರವಾಗಿ ಕಾರ್ಯಪ್ರವೃತ್ತರಾಗಿದ್ದರ ಹಿನ್ನೆಲೆಯಲ್ಲಿ ಸಮಿತಿಗೆ ನಿಗಧಿಪಡಿಸಿದ್ದ ಅವಧಿಯಲ್ಲಿ ವಾರ್ಡ್‌ಗಳ ಪುನರ್ ವಿಂಗಡಣಾ ಕಾರ್ಯವನ್ನು ಪೂರ್ಣಗೊಳಿಸಲು ಸಾಧ್ಯವಾಗದಿರುವುದರಿಂದ ಸಮಿತಿಯ ಅವಧಿಯನ್ನು ಇನ್ನೂ ಎರಡು ತಿಂಗಳು ವಿಸ್ತರಿಸುವಂತೆ ಕೋರಿದ್ದು, ವಿಷಯವು ಸರ್ಕಾರದ ಹಂತದಲ್ಲಿ ಪರಿಶೀಲನೆಯಲ್ಲಿರುತ್ತದೆ. ಸಮಿತಿಯು ತನ್ನ ವರದಿಯನ್ನು ನೀಡಿದ ನಂತರ, ನಿಯಮಾನುಸಾರ ವಾರ್ಡ್‌ಗಳ ಪುನರ್ ರಚನೆಯನ್ನು ಮಾಡಿ, ನಂತರ ಚುನಾವಣೆಯನ್ನು ನಡೆಸಲು ಕ್ರಮವಹಿಸಲಾಗುವುದು.

ಈ	ಸರ್ಕಾರವು ಬಿ.ಬಿ.ಎಂ.ಪಿ ಚುನಾವಣೆಗೆ ವಾರ್ಡ್‌ವಾರು ಮೀಸಲಾತಿಯನ್ನು ನಿಗಧಿಗೊಳಿಸ ಲಾಗಿದೆಯೇ; ಹಾಗಿದ್ದಲ್ಲಿ ಪಟ್ಟಿಯನ್ನು ನೀಡುವುದು;	ಪಾಲಿಕೆಯ ವಾರ್ಡ್‌ಗಳ ಪುನರ್ ರಚನೆ ಕಾರ್ಯ ಪೂರ್ಣಗೊಂಡ ನಂತರ ಮೀಸಲಾತಿ ನಿಗಧಿಗೊಳಿಸುವ ಬಗ್ಗೆ ನಿಯಮಾನುಸಾರ ಪರಿಶೀಲಿಸಿ, ಕ್ರಮ ಜರುಗಿಸಲಾಗುವುದು.
ಉ	ಹಾಗಿಲ್ಲವಾದ್ದಲ್ಲಿ, ಯಾವ ದಿನಾಂಕದೊಳಗೆ ಮೀಸಲಾತಿಯನ್ನು ನಿಗಧಿಗೊಳಿಸಲು ಉದ್ದೇಶಿಸ ಲಾಗಿದೆ?(ಸಂಪೂರ್ಣಮಾಹಿತಿಯನ್ನುಒದಗಿಸುವುದು)	

ಸಂಖ್ಯೆ: ನಅಇ 35 ಬಿಬಿಎಸ್ 2022(ಇ)

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ